**ಇಂದು ದಿ: 16.07.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳು ಸತ್ಯ ಇರುತ್ತವೆ. ಪ್ರಮಾಣ ಪತ್ರದಲ್ಲಿ ಇರುವ ಸಹಿ ನನ್ನದೇ ಆಗಿರುತ್ತದೆ.

**ಮುಂದುವರೆದ ಮುಖ್ಯವಿಚಾರಣೆ: ವಾದಿಗಳ ಪರವಾಗಿ: ಶ್ರೀ ಎನ್ ಜಿ .,ವಕೀಲರಿಂದ**

1. 05 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-01 ರಿಂದ 5 ಎಂದು ಗುರುತಿಸಲಾಯಿತು. ವಂಶವೃಕ್ಷದ ದೃಢೀಕರಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-06 ಎಂದು ಗುರುತಿಸಲಾಯಿತು. ಹೊಸದುರ್ಗ ತಹಶೀಲ್ದಾರರು ಕೊಟ್ಟ ವಿಚಾರಣಾ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ-07 ಎಂದು ಗುರುತಿಸಲಾಯಿತು. 05 ಪಹಣಿ ಪತ್ರಿಕೆಗಳ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-08 ರಿಂದ 12 ಎಂದು ಗುರುತಿಸಲಾಯಿತು. ದಿಃ 22.01.1944 ರ ನೋಂದಾಯಿತು ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು ಗುರುತಿಸಲಾಯಿತು. 2 ಇಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-14 ಮತ್ತು 15 ಎಂದು ಗುರುತಿಸಲಾಯಿತು. 15 ಪಹಣಿ ಪತ್ರಿಕೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-16 ರಿಂದ 30 ಎಂದು ಗುರುತಿಸಲಾಯಿತು. ಮ್ಯುಟೇಷನ್ ರಿಜಿಸ್ಟ್ರರ್ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-31 ಎಂದು ಗುರುತಿಸಲಾಯಿತು. ಹೊಸದುರ್ಗದ ತಹಶೀಲ್ದಾರರ ಆದೇಶದ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-32 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ವಾದಿಗಳ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

ಓ.ಹೇ.ಕೇ.ಸ.ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊಸದುರ್ಗ.